RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ– IV-A<br>Part– IV-A | ಬೆಂಗಳೂರು, ಬುಧವಾರ, ಫೆಬ್ರವರಿ ೨೪, ೨೦೧೬ (ಫಾಲ್ಗುಣ ೫, ಶಕ ವರ್ಷ ೧೯೩೭)<br>Bengaluru, Wednesday, February 24, 2016 (Palguna 5, Shaka Varsha 1937) | ನಂ. ೩೧೭<br>No. 317 |
|---|---|---|

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಗ್ರಾಅಪ: 283 ಜಿಪಸ 2015, ಬೆಂಗಳೂರು, ದಿನಾಂಕ: 24.02.2016**

**ಕರ್ನಾಟಕ ಪಂಚಾಯತ್ ರಾಜ್ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ತಿದ್ದುಪಡಿ ನಿಯಮಗಳು, 2016.**

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 (1993 ರ ಕರ್ನಾಟಕ ಅಧಿನಿಯಮ ಸಂಖ್ಯೆ:14) ರ ಪ್ರಕರಣ 177 ರೊಂದಿಗೆ ಓದಲಾದಂತೆ, ಪ್ರಕರಣ 311 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ನಿಯಮಗಳು 2005 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಕರಡು ಅಧಿಸೂಚನೆ ಸಂಖ್ಯೆ : ಗ್ರಾಅಪ: 283 ಜಿಪಸ 2015, ಬೆಂಗಳೂರು ದಿನಾಂಕ: 03-02-2016 ರಂದು ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿದ್ದು, ಆ ಮೂಲಕ ಬಾಧಿತರಾಗುವ ಸಂಭವವಿರುವ ವ್ಯಕ್ತಿಗಳಿಂದ ಹದಿನೈದು ದಿನಗಳೊಳಗಾಗಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸಿರುವುದರಿಂದ ಮತ್ತು ದಿನಾಂಕ:03-02-2016 ರ ವಿಶೇಷ ರಾಜ್ಯ ಪತ್ರವನ್ನು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ, ಸದರಿ ಕರಡು ನಿಯಮದ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿರುವುದಿಲ್ಲ.

ಈಗ 1993 ರ ಕರ್ನಾಟಕ ಪಂಚಾಯತ್ ರಾಜ್ (ಅಧಿನಿಯಮ ಸಂಖ್ಯೆ 14) 311 ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳ ಕಂಡಂತೆ ಕರ್ನಾಟಕ ಪಂಚಾಯತ್ ರಾಜ್ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ತಿದ್ದುಪಡಿ ನಿಯಮಗಳನ್ನು ರಚಿಸುತ್ತದೆ.

ನಿಯಮಗಳು

1. ಹೆಸರು ಮತ್ತು ಪ್ರಾರಂಭ: (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ತಿದ್ದುಪಡಿ ನಿಯಮಗಳು, 2016 ಎಂದು ಕರೆಯತಕ್ಕದ್ದು.

   (2) ಅವು ಸರ್ಕಾರದ ರಾಜ್ಯ ಪತ್ರದಲ್ಲಿ ಅಂತಿಮ ಅಧಿಸೂಚನೆ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 3ಕ್ಕೆ ತಿದ್ದುಪಡಿ**:–ಕರ್ನಾಟಕ ಪಂಚಾಯತ್ ರಾಜ್ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ನಿಯಮಗಳು–2010 ರ ನಿಯಮ 3 ರಲ್ಲಿರುವ ಕೋಷ್ಟಕದ ಬದಲಾಗಿ ಈ ಕೆಳಗಿನ ಕೋಷ್ಟಕವನ್ನು ಪ್ರತ್ಯಾಯೋಜಿಸತಕ್ಕದ್ದು. ಅಂದರೆ:–

"ಕೋಷ್ಟಕ"

| ಕ್ರ.ಸಂ. | ಪ್ರವರ್ಗ | ಅಧ್ಯಕ್ಷ | | ಉಪಾಧ್ಯಕ್ಷರು | |
|---|---|---|---|---|---|
| | | ಒಟ್ಟು | ಮಹಿಳೆಯರು | ಒಟ್ಟು | ಮಹಿಳೆಯರು |
| 1 | ಅನುಸೂಚಿತ ಜಾತಿ | **6** | **3** | **6** | **3** |
| 2 | ಅನುಸೂಚಿತ ಪಂಗಡ | **3** | **2** | **3** | **2** |
| 3 | ಹಿಂದುಳಿದ ವರ್ಗಗಳು<br>1. ಪ್ರವರ್ಗ–ಎ | **5** | **2** | **5** | **2** |
| | 2. ಪ್ರವರ್ಗ–ಬಿ | **1** | **1** | **1** | **1** |
| 4 | ಮೀಸಲಿಡದ ಸ್ಥಾನಗಳು | **15** | **7** | **15** | **7** |
| | **ಒಟ್ಟು** | **30** | **15** | **30** | **15** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಎಂ.ಬಿ.ಧೋತ್ರೆ**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) 1000 ಪ್ರತಿಗಳು)